## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | **409** |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಅಡಗೂರ್ ಹೆಚ್. ವಿಶ್ವನಾಥ್ |
| ಉತ್ತರಿಸಬೇಕಾದ ದಿನಾಂಕ | : | 19/02/2024 |
| ಉತ್ತರಿಸುವ ಸಚಿವರು | : | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿನ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿರುವ ಅಧಿಕಾರಿ/ಸಿಬ್ಬಂದಿಗಳನ್ನು ಕೆ.ಸಿ.ಎಸ್.ಆರ್. ನಿಯಮಾವಳಿಯಡಿಯಲ್ಲಿ ಸಾಮಾನ್ಯ ವರ್ಗಾವಣೆಗೆ ಒಳಪಡಿಸಲಾಗುವುದೇ; (ಷರತ್ತು ಮತ್ತು ನಿಬಂಧನೆಗಳ ವಿವರ ನೀಡುವುದು). | ಅಧಿಸೂಚನೆ ಸಂಖ್ಯೆ : ಆಕುಕ 332 ಹೆಚ್ಎಸ್ಹೆಚ್ 2012, ದಿನಾಂಕ : 10/12/2012ರಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಈ ಕೆಳಕಂಡ ಸಂಸ್ಥೆ/ಹುದ್ದೆಗಳನ್ನು ಹೊರತುಪಡಿಸಿ, ಇನ್ನುಳಿದ ಗ್ರೂಪ್-ಎ, ಬಿ, ಸಿ ಮತ್ತು ಡಿ ವೃಂದದ ವೈದ್ಯಕೀಯ ಮತ್ತು ಇತರೆ ಸಿಬ್ಬಂದಿಗಳ ವರ್ಗಾವಣೆಯನ್ನು ಕರ್ನಾಟಕ ರಾಜ್ಯ ನಾಗರೀಕ ಸೇವಾ (ವೈದ್ಯಾಧಿಕಾರಿಗಳು ಮತ್ತು ಇತರೆ ಸಿಬ್ಬಂದಿಗಳ ವರ್ಗಾವಣೆ ನಿಯಂತ್ರಣ), ಕಾಯ್ದೆ, 2011 ಹಾಗೂ ಅದರಡಿ ರಚಿಸಲಾದ 2011, 2013, 2017ರ ನಿಯಮಗಳಡಿ ಗಣಕೀಕೃತ ಸಮಾಲೋಚನೆಯ ಮೂಲಕ ವರ್ಗಾವಣೆಗೆ ಒಳಪಡಿಸಲಾಗಿದೆ.-<br>1. ಸಂತಾನೋತ್ಪತ್ತಿ ಮತ್ತು ಮಕ್ಕಳ ಆರೋಗ್ಯ ಕಾರ್ಯಕ್ರಮದಡಿ ಕರ್ತವ್ಯ ನಿರ್ವಹಿಸುವ ಜಿಲ್ಲಾ ಕಾರ್ಯಕ್ರಮಾಧಿಕಾರಿಗಳು.<br>2. ರಾಷ್ಟ್ರೀಯ ಅಂಧತ್ವ ಮತ್ತು ದೃಷ್ಟಿ ಮಾಂದ್ಯತೆ ನಿಯಂತ್ರಣಾ ಕಾರ್ಯಕ್ರಮ (ಎನ್.ಪಿ.ಸಿ.ಬಿ.ವಿ.ಐ)<br>3. ರಾಷ್ಟ್ರೀಯ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಕಾರ್ಯಕ್ರಮ (ಎನ್.ವಿ.ಬಿ.ಡಿ.ಸಿ.ಪಿ);<br>4. ರಾಷ್ಟ್ರೀಯ ಕುಷ್ಠರೋಗ ನಿರ್ಮೂಲನೆ ಕಾರ್ಯಕ್ರಮ (ಎನ್ಎಲ್ಇಪಿ)<br>5. ಸಮಗ್ರ ರೋಗಗಳ ಕಣ್ಗಾವಲಯ ಯೋಜನೆ (ಐ.ಡಿ.ಎಸ್.ಪಿ)<br>6. ಕರ್ನಾಟಕ ರಾಜ್ಯ ಏಡ್ಸ್ ನಿಯಂತ್ರಣ ಕಾರ್ಯಕ್ರಮ;<br>7. ರಾಷ್ಟ್ರೀಯ ಕ್ಷಯರೋಗ ನಿಯಂತ್ರಣ ಕಾರ್ಯಕ್ರಮ;<br>8. ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನದ ಜಿಲ್ಲಾ ಕಾರ್ಯಕ್ರಮ ನಿರ್ವಹಣಾಧಿಕಾರಿ;<br>ಆಡಳಿತಾತ್ಮಕ ಹುದ್ದೆಗಳಿಗೆ ಸಂಬಂಧಿಸಿದಂತೆ ಆದೇಶ ಸಂಖ್ಯೆ : ಆಕುಕ 82 ಎಂಎಸ್ಎಸ್ 2011, ದಿನಾಂಕ : 02/06/2011ರಲ್ಲಿ ಮಾನದಂಡಗಳನ್ನು ನಿಗದಿಪಡಿಸಲಾಗಿದ್ದು, ಅದರಂತೆ ಆಡಳಿತಾತ್ಮಕ ಹುದ್ದೆಗಳ ಭರ್ತಿಗೆ ಕ್ರಮವಹಿಸಲಾಗುತ್ತಿದೆ<br>**(ಅನುಬಂಧದಲ್ಲಿ ನೀಡಲಾಗಿದೆ).** |
| 2 | ಹಾಗಿದ್ದಲ್ಲಿ, ಸದರಿ ನಿಯಮಾವಳಿಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ ಮತ್ತು ಸಿಬ್ಬಂದಿ ವರ್ಗದವರು ಕಳೆದ 10-20 ವರ್ಷಗಳಿಂದ ಬಾಗಲಕೋಟೆ ಜಿಲ್ಲೆಯ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ | ಕರ್ನಾಟಕ ರಾಜ್ಯ ನಾಗರೀಕ ಸೇವಾ (ವೈದ್ಯಾಧಿಕಾರಿಗಳು ಮತ್ತು ಇತರೆ ಸಿಬ್ಬಂದಿಗಳ ವರ್ಗಾವಣೆ ನಿಯಂತ್ರಣ), ಕಾಯ್ದೆ, 2011 ಹಾಗೂ ಅದರಡಿ ರಚಿಸಲಾದ ನಿಯಮಗಳಡಿ ಪ್ರತಿ ವರ್ಷದ ಏಪ್ರಿಲ್ ಮತ್ತು ಮೇ ತಿಂಗಳಿನಲ್ಲಿ ವರ್ಗಾವಣೆಗೆ ಅರ್ಜಿಗಳನ್ನು ಆಹ್ವಾನಿಸಿ, ಸಮಾಲೋಚನೆ ಮುಖಾಂತರ ವರ್ಗಾವಣೆ ಮಾಡಲು ಅವಕಾಶವಿರುತ್ತದೆ. |

Scanned with OKEN Scanner

| | | |
|---|---|---|
| | ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸದರಿ ಅಧಿಕಾರಿ/ಸಿಬ್ಬಂದಿಗಳನ್ನು ಬೇರೆಕಡೆಗೆ ವರ್ಗಾವಣೆ ಮಾಡಲು ಸರ್ಕಾರಕ್ಕಿರುವ ತೊಂದರೆಗಳೇನು; | ಅದರಂತೆ ಬಾಗಲಕೋಟೆ ಜಿಲ್ಲೆಯ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಒಂದೇ ಸ್ಥಳದಲ್ಲಿ ಕನಿಷ್ಠ ಸೇವಾ ಅವಧಿಯನ್ನು ಪೂರ್ಣಗೊಳಿಸಿದ ಗ್ರೂಪ್-ಎ, ಬಿ, ಸಿ ಮತ್ತು ಡಿ ವರ್ಗದ ವೈದ್ಯಾಧಿಕಾರಿ ಮತ್ತು ಇತರೆ ಸಿಬ್ಬಂದಿಗಳು ವರ್ಗಾವಣೆಗಾಗಿ ಗಣಕೀಕೃತ ಸಮಾಲೋಚನೆಯಲ್ಲಿ ಭಾಗವಹಿಸಿದಲ್ಲಿ, ಅಂತಹ ವೈದ್ಯಾಧಿಕಾರಿ ಮತ್ತು ಇತರೆ ಸಿಬ್ಬಂದಿಗಳನ್ನು ವರ್ಗಾವಣೆ ಮಾಡಲು ಕ್ರಮವಹಿಸಲಾಗುತ್ತದೆ. |
| 3 | ಸದರಿ ಅಧಿಕಾರಿ/ಸಿಬ್ಬಂದಿ ವರ್ಗದವರ ದುರ್ವರ್ತನೆ ಹಾಗೂ ಭ್ರಷ್ಟಾಚಾರದಿಂದಾಗಿ ಜಿಲ್ಲೆಯ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಸಾಕಷ್ಟು ಕೆಲಸ ಕಾರ್ಯಗಳು ವಿಳಂಬವಾಗುತ್ತಿರುವುದರಿಂದ ಸಾರ್ವಜನಿಕರಿಗೆ ಹಾಗೂ ರೋಗಿಗಳಿಗೆ ಸಾಕಷ್ಟು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ |
| ಈ) | ಬಂದಿದ್ದಲ್ಲಿ, ಸರ್ಕಾರ ಕೂಡಲೇ ಇವರುಗಳ ಮೇಲೆ ಶಿಸ್ತು ಕ್ರಮ ಕೈಗೊಂಡು ಬೇರೆಕಡೆಗೆ ವರ್ಗಾಯಿಸಲು ಕ್ರಮ ಕೈಗೊಳ್ಳುವುದೇ? (ವಿವರ ನೀಡುವುದು) | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಸರ್ಕಾರಿ ನೌಕರರಿಗೆ ತರವಲ್ಲದ ವರ್ತನೆ ಎಸಗಿರುವುದು ಕಂಡುಬಂದ ಅಧಿಕಾರಿ/ಸಿಬ್ಬಂದಿಗಳ ವಿರುದ್ಧ ಮಾನ್ಯ ಕರ್ನಾಟಕ ಆಡಳಿತ ನ್ಯಾಯಮಂಡಳಿ/ಕರ್ನಾಟಕ ಉಚ್ಛ ನ್ಯಾಯಾಲಯಗಳು ನೀಡಲಾಗುವ ನಿರ್ದೇಶನ/ಆದೇಶಗಳನ್ನು ಹೊರತುಪಡಿಸಿ, 'ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957'ರ ನಿಯಮದಡಿ ಶಿಸ್ತು ಕ್ರಮ ಪ್ರಾರಂಭಿಸಿ, ಅಂತಹ ಅಧಿಕಾರಿ/ಸಿಬ್ಬಂದಿಗಳನ್ನು ಆಡಳಿತಾತ್ಮಕವಲ್ಲದ ಬೇರೆ ಹುದ್ದೆ/ಸ್ಥಳಕ್ಕೆ ವರ್ಗಾಯಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. |

(HFW/15/HSD/2024)

**(ದಿನೇಶ್ ಗುಂಡೂರಾವ್)**
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು.

Scanned with OKEN Scanner

(28) Annexure-
3

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕೆಲವು ಆಡಳಿತಾತ್ಮಕ ಮತ್ತು ವೈದ್ಯ ವೃಂದದ ಹುದ್ದೆಗಳನ್ನು ಭರ್ತಿ ಮಾಡಲು ಮಾನದಂಡಗಳನ್ನು ರೂಪಿಸುವ ಬಗ್ಗೆ.

ಓದಲಾಗಿದೆ:- (1) ಸರ್ಕಾರಿ ಆದೇಶ ಸಂಖ್ಯೆ: ಆಕುಕ 255 ಹೆಚ್‌ಎಸ್‌ಹೆಚ್ 2008 ದಿನಾಂಕ: 4-06-2008.

(2) ಸರ್ಕಾರದ ಅಧಿಸೂಚನೆ ಸಂಖ್ಯೆ: ಆಕುಕ 255 ಹೆಚ್‌ಎಸ್‌ಹೆಚ್ 2008 (ಭಾಗ) ದಿನಾಂಕ: 4-06-2010.

(3) ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರ ಪತ್ರ ದಿನಾಂಕ: ಹೆಚ್‌ಆರ್‌ಎ/01/2011/12 ದಿನಾಂಕ: 01-04-2011.

*******

ಪ್ರಸ್ತಾವನೆ:

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿನ ಅರ್ಹ ವೈದ್ಯಾಧಿಕಾರಿಗಳನ್ನು ಆಡಳಿತ ಹಿತದೃಷ್ಟಿಯಿಂದ ಸೂಕ್ತ ಸ್ಥಳಗಳಿಗೆ ನೇಮಿಸುವ/ವರ್ಗಾಯಿಸುವ ಬಗ್ಗೆ ಕೆಲವು ಮಾರ್ಗಸೂಚಿಗಳನ್ನು ಮೇಲೆ (1) ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ಹೊರಡಿಸಲಾಗಿತ್ತು. ಸದರಿ ಆದೇಶಕ್ಕೆ ಮೇಲೆ (2) ರಲ್ಲಿ ಓದಲಾದ ಸರ್ಕಾರದ ಅಧಿಸೂಚನೆಯಲ್ಲಿ ಕೆಲವು ಮಾರ್ಪಾಡನ್ನು ಮಾಡಲಾಗಿದೆ.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವ್ಯಾಪ್ತಿಯಡಿ ಬರುವ ಸರ್ಕಾರಿ ಆಸ್ಪತ್ರೆ/ಕೇಂದ್ರಗಳಲ್ಲಿ ಕಾರ್ಯನಿರ್ವಹಿಸಲು ಎಂ.ಬಿ.ಬಿ.ಎಸ್. ವಿದ್ಯಾರ್ಹತೆಯುಳ್ಳವರನ್ನು ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳಾಗಿ ನೇರ ನೇಮಕಾತಿ ಮೂಲಕ ನೇಮಿಸಿಕೊಳ್ಳಲಾಗುತ್ತಿದೆ. ಆ ರೀತಿ ನೇಮಕ ಹೊಂದಿದ ವೈದ್ಯರು ಕನಿಷ್ಠ ಆರು ವರ್ಷಗಳ ಸೇವೆಯನ್ನು ಸಲ್ಲಿಸಿ ಸ್ನಾತಕೋತ್ತರ ಪದವಿ ಅಥವಾ ಡಿಪ್ಲೋಮಾ ಹೊಂದಿದ್ದಲ್ಲಿ ಅಂತಹವರನ್ನು ತಜ್ಞರಾಗಿ ಹಾಗೂ ಹದಿಮೂರು ವರ್ಷಗಳ ಕನಿಷ್ಠ ಸೇವೆ ಸಲ್ಲಿಸಿದ್ದಲ್ಲಿ ಹಿರಿಯ ತಜ್ಞರಾಗಿ ಕಾಲಮಿತಿ ಮುಂಬಡ್ತಿ ಯೋಜನೆಯಡಿ ಮುಂಬಡ್ತಿಯನ್ನು ನೀಡಲಾಗುತ್ತಿದೆ. ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಯಾಗಿ ನೇಮಕಗೊಂಡ ವೈದ್ಯರು ಯಾವುದೇ ಸ್ನಾತಕೋತ್ತರ ಪದವಿ/ಡಿಪ್ಲೋಮಾ ಹೊಂದಿರದೇ ಇದ್ದಲ್ಲಿ, ಅಂತಹ ವೈದ್ಯರು ಕನಿಷ್ಠ ಆರು ವರ್ಷಗಳ ಸೇವೆ ಸಲ್ಲಿಸಿದ್ದಲ್ಲಿ ಹಿರಿಯ ವೈದ್ಯಾಧಿಕಾರಿಯಾಗಿ ಹಾಗೂ ಹದಿಮೂರು ವರ್ಷಗಳ ಸೇವೆ ಸಲ್ಲಿಸಿದ್ದಲ್ಲಿ ಉಪ ಮುಖ್ಯ ವೈದ್ಯಾಧಿಕಾರಿಯಾಗಿ ಕಾಲಮಿತಿ ಮುಂಬಡ್ತಿ ಯೋಜನೆಯಡಿ ಮುಂಬಡ್ತಿಯನ್ನು ನೀಡಲಾಗುತ್ತಿದೆ. ಸದರಿ ವೈದ್ಯಾಧಿಕಾರಿಗಳಿಗೆ ಕಾಲಮಿತಿ ಮುಂಬಡ್ತಿ ನೀಡುವಾಗ ವಿದ್ಯಾರ್ಹತೆ, ಸೇವಾ ಜ್ಯೇಷ್ಠತೆ ಮತ್ತು ಕನಿಷ್ಠ ವರ್ಷಗಳ ಸೇವಾವಧಿಯನ್ನು ಪರಿಗಣಿಸಲಾಗುತ್ತಿದೆ.

29



ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಸಾರ್ವಜನಿಕರಿಗೆ ಆರೋಗ್ಯ ಸೇವೆಯನ್ನು ಒದಗಿಸುವ ನಿಟ್ಟಿನಲ್ಲಿ ಅನೇಕ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುತ್ತಿದೆ. ಸದರಿ ಕಾರ್ಯಕ್ರಮಗಳನ್ನು ವ್ಯವಸ್ಥಿತವಾಗಿ ಜಾರಿಗೊಳಿಸುವ ಸಲುವಾಗಿ ಇಲಾಖೆಯಲ್ಲಿ ಕೆಲವು ಆಡಳಿತಾತ್ಮಕ/ವೈದ್ಯರ ಹುದ್ದೆಗಳನ್ನು ಸೃಜಿಸಲಾಗಿದೆ. ಅವುಗಳಲ್ಲಿ ಪ್ರಮುಖವಾದಂತವು (1) ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು, (2) ಜಿಲ್ಲಾ/ಪ್ರಾದೇಶಿಕ ತರಬೇತಿ ಸಂಸ್ಥೆಗಳ ಪ್ರಾಂಶುಪಾಲರು, (3) ಜಿಲ್ಲಾ ಶಸ್ತ್ರ ಚಿಕಿತ್ಸಕರು, (4) ಉಪ ನಿರ್ದೇಶಕರು, (5) ಪ್ರಮುಖ ಆಸ್ಪತ್ರೆಗಳ ಸೂಪರಿಂಟೆಂಡೆಂಟ್‌ಗಳು, (6) ಜಿಲ್ಲಾ ಮಟ್ಟದ ಕಾರ್ಯಕ್ರಮಾಧಿಕಾರಿಗಳು, (7) ತಾಲ್ಲೂಕು ಆರೋಗ್ಯಾಧಿಕಾರಿಗಳು ಮತ್ತು (8) ಜಿಲ್ಲಾ ಪ್ರಾಯೋಜನಾ ನಿರ್ವಹಣಾಧಿಕಾರಿಗಳು. ಸದರಿ ಹುದ್ದೆಗಳಿಗೆ ಸ್ಥಳನಿಯುಕ್ತಿ ಮಾಡುವಾಗ ಕನಿಷ್ಠ ವಿದ್ಯಾರ್ಹತೆ, ಅನುಭವ, ಉನ್ನತ ವ್ಯಾಸಂಗ/ತರಬೇತಿ, ಉತ್ತಮ ಸೇವಾ ದಾಖಲೆ ಇತ್ಯಾದಿ., ಮಾನದಂಡಗಳನ್ನು ಅನುಸರಿಸಿ ವೈದ್ಯರನ್ನು ಆಯ್ಕೆ ಮಾಡುವುದು ಆಡಳಿತಾತ್ಮಕ ಹಿತದೃಷ್ಟಿಯಿಂದ ವಿಹಿತವಾಗಿದೆ. ಈ ಬಗ್ಗೆ ಮೇಲೆ (3) ರಲ್ಲಿ ಓದಲಾದ ಪತ್ರದಲ್ಲಿ ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ರವರು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿದ್ದಾರೆ. ಸದರಿ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿದೆ.

ಆದುದರಿಂದ, ಈ ಆದೇಶ

<u>ಸರ್ಕಾರದ ಆದೇಶ ಸಂಖ್ಯೆ: ಆಕುಕ 82 ಎಂ.ಎಸ್.ಎಸ್. 2011</u>

<u>ಬೆಂಗಳೂರು ದಿನಾಂಕ: 02-06-2011</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ~~ಇಲಾಖೆಯ ಈ ಕೆಳಕಂಡ ಆಡಳಿತಾತ್ಮಕ/ವೈದ್ಯರ ಹುದ್ದೆಗಳನ್ನು ಭರ್ತಿ ಮಾಡುವಾಗ ಈ ಆದೇಶಕ್ಕೆ~~ ಲಗತ್ತಿಸಿರುವ ಅನುಬಂಧದಲ್ಲಿ ಸೂಚಿಸಿರುವ ಮಾನದಂಡಗಳನ್ನು ಅನುಸರಿಸತಕ್ಕದ್ದು:-

(1) ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಹಾಗೂ
ಜಿಲ್ಲಾ/ಪ್ರಾದೇಶಿಕ ತರಬೇತಿ ಸಂಸ್ಥೆಗಳ ಪ್ರಾಂಶುಪಾಲರು

(2) ಜಿಲ್ಲಾ ಶಸ್ತ್ರ ಚಿಕಿತ್ಸಕರು

(3) ಉಪ ನಿರ್ದೇಶಕರು

(4) ಪ್ರಮುಖ ಆಸ್ಪತ್ರೆಗಳ ಸೂಪರಿಂಟೆಂಡೆಂಟ್‌ಗಳು

(5) ಜಿಲ್ಲಾ ಮಟ್ಟದ ಕಾರ್ಯಕ್ರಮಾಧಿಕಾರಿಗಳು

(6) ತಾಲ್ಲೂಕು ಆರೋಗ್ಯಾಧಿಕಾರಿಗಳು ಮತ್ತು

(7) ಜಿಲ್ಲಾ ಪ್ರಾಯೋಜನಾ ನಿರ್ವಹಣಾಧಿಕಾರಿಗಳು

---

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಬಿ.ಎಫ್. ಹುಬ್ಬಳ್ಳಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.

ಗೆ:

1) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2) ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು.
3) ಯೋಜನಾ ಆಡಳಿತಾಧಿಕಾರಿಗಳು, ಕೆ.ಹೆಚ್.ಎಸ್.ಡಿ.ಆರ್.ಪಿ. ಬೆಂಗಳೂರು.
4) ಅಭಿಯಾನ ನಿರ್ದೇಶಕರು, ಎನ್.ಆರ್.ಹೆಚ್.ಎಂ. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು.
5) ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು.
6) ಎಲ್ಲಾ ಜಿಲ್ಲಾ ಜಿಲ್ಲಾಧಿಕಾರಿಗಳು.
7) ಎಲ್ಲಾ ಮುಖ್ಯ ಕಾರ್ಯ ನಿರ್ವಹಣಾ ಅಧಿಕಾರಿಗಳು, ಜಿಲ್ಲಾ ಪಂಚಾಯತ್.
8) ಎಲ್ಲಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು.
9) ಎಲ್ಲಾ ಜಿಲ್ಲಾ ಶಸ್ತ್ರ ಚಿಕಿತ್ಸಕರುಗಳು.
~~10) ಅಧ್ಯಕ್ಷರು, ಕರ್ನಾಟಕ ವೈದ್ಯಾಧಿಕಾರಿಗಳ ಸಂಘ, ಬೆಂಗಳೂರು.~~
11) ಇಲಾಖೆಯ ವೆಬ್‌ಸೈಟ್.
12) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.

ಪ್ರತಿ ಮಾಹಿತಿಗಾಗಿ:-

1) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ.
2) ಸರ್ಕಾರದ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.
3) ಸರ್ಕಾರದ ಜಂಟಿ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.
4) ಸರ್ಕಾರದ ಉಪ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.
5) ಸರ್ಕಾರದ ಎಲ್ಲಾ ಅಧೀನ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.

(31)



**ಸರ್ಕಾರಿ ಆದೇಶ ಸಂಖ್ಯೆ: ಆಕುಕ 82 ಎಂ.ಎಸ್.ಎಸ್. 2011**
**ದಿನಾಂಕ: 2-6-2011 ಕ್ಕೆ ಅನುಬಂಧ**

**ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು/ಜಿಲ್ಲಾ/ಪ್ರಾದೇಶಿಕ ತರಬೇತಿ ಸಂಸ್ಥೆಗಳ ಪ್ರಾಂಶುಪಾಲರು/ಜಿಲ್ಲಾ ಶಸ್ತ್ರ ಚಿಕಿತ್ಸಕರು/ಉಪ ನಿರ್ದೇಶಕರು/ ಪ್ರಮುಖ ಆಸ್ಪತ್ರೆಗಳ ಸೂಪರಿಂಟೆಂಡೆಂಟ್‌ಗಳು/ಜಿಲ್ಲಾ ಮಟ್ಟದ ಕಾರ್ಯಕ್ರಮಾಧಿಕಾರಿಗಳು/ತಾಲ್ಲೂಕು ಆರೋಗ್ಯಾಧಿಕಾರಿಗಳು ಮತ್ತು ಜಿಲ್ಲಾ ಪ್ರಾಯೋಜನಾ ನಿರ್ವಹಣಾಧಿಕಾರಿಗಳ ಹುದ್ದೆಗಳನ್ನು ಭರ್ತಿ ಮಾಡುವಾಗ ಅನುಸರಿಸಬೇಕಾದ ಮಾನದಂಡಗಳು.**

(1) ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು/ಜಿಲ್ಲಾ/ಪ್ರಾದೇಶಿಕ ತರಬೇತಿ ಸಂಸ್ಥೆಗಳ ಪ್ರಾಂಶುಪಾಲರು.

(ಎ) ನಿಯತಕಾಲಿಕವಾಗಿ (Regular) ನೇಮಕಗೊಂಡು ಕನಿಷ್ಠ ಇಪ್ಪತ್ತು ವರ್ಷಗಳ ಸೇವೆಯನ್ನು ಸಲ್ಲಿಸಿರುವ ಉಪ ಮುಖ್ಯ ವೈದ್ಯಾಧಿಕಾರಿ ಅಥವಾ ಹಿರಿಯ ತಜ್ಞರು ಪರಿಗಣನೆಗೆ ಅರ್ಹರಾಗಿರುತ್ತಾರೆ. ಆ ಪೈಕಿ ನಿಯತಕಾಲಿಕವಾಗಿ ನೇಮಕಗೊಂಡ ನಂತರ ಕನಿಷ್ಠ ಮೂರು ವರ್ಷಗಳ ಸೇವೆಯನ್ನು ಗ್ರಾಮೀಣ ಪ್ರದೇಶದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಸಲ್ಲಿಸಿರತಕ್ಕದ್ದು.

(ಬಿ) ಕನಿಷ್ಠ ಮೂರು ವರ್ಷಗಳ ಸೇವೆಯನ್ನು ಆಡಳಿತಾತ್ಮಕ ವೈದ್ಯಾಧಿಕಾರಿ/ ತಾಲ್ಲೂಕು ಆರೋಗ್ಯಾಧಿಕಾರಿ/ಕಾರ್ಯಕ್ರಮಾಧಿಕಾರಿಯಾಗಿ ಸಲ್ಲಿಸಿರತಕ್ಕದ್ದು.

(ಸಿ) ಅಧಿಕಾರಿಯು ಉತ್ತಮ ಸೇವಾ ದಾಖಲೆ ಹೊಂದಿದ್ದು, ಯಾವುದೇ ಇಲಾಖಾ/ ಕ್ರಿಮಿನಲ್ ವಿಚಾರಣೆ ಇರಕೂಡದು.

(ಡಿ) ಸಾರ್ವಜನಿಕ ಆರೋಗ್ಯದಲ್ಲಿ ಸ್ನಾತಕೋತ್ತರ ಪದವಿ ಅಥವಾ ಡಿಪ್ಲೊಮಾ ಅಪೇಕ್ಷಣೀಯ.

(ಇ) ಒಂದು ತಿಂಗಳ ಅಥವಾ ಅಧಿಕ ಅವಧಿಯ ಆಡಳಿತಾತ್ಮಕ ತರಬೇತಿ ಅಪೇಕ್ಷಣೀಯ.

(ಎಫ್) ವೃತ್ತಿಪರ (Professional) ಅಭಿವೃದ್ಧಿ ಕೋರ್ಸ್‌ನಲ್ಲಿ ತರಬೇತಿ ಅಪೇಕ್ಷಣೀಯ.

(2) ಜಿಲ್ಲಾ ಶಸ್ತ್ರ ಚಿಕಿತ್ಸಕರು.

(ಎ) ನಿಯತಕಾಲಿಕವಾಗಿ (Regular) ನೇಮಕಗೊಂಡು ಕನಿಷ್ಠ ಇಪ್ಪತ್ತು ವರ್ಷಗಳ ಸೇವೆಯನ್ನು ಸಲ್ಲಿಸಿರುವ ಹಿರಿಯ ತಜ್ಞರು ಪರಿಗಣನೆಗೆ ಅರ್ಹರಾಗಿರುತ್ತಾರೆ. ಆ ಪೈಕಿ ನಿಯತಕಾಲಿಕವಾಗಿ ನೇಮಕಗೊಂಡ ನಂತರ ಕನಿಷ್ಠ ಮೂರು ವರ್ಷಗಳ

ಸೇವೆಯನ್ನು ಗ್ರಾಮೀಣ ಪ್ರದೇಶದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಸಲ್ಲಿಸಿರತಕ್ಕದ್ದು.

(ಬಿ) ಕನಿಷ್ಠ ಮೂರು ವರ್ಷಗಳ ಸೇವೆಯನ್ನು ಆಡಳಿತಾತ್ಮಕ ವೈದ್ಯಾಧಿಕಾರಿ/ ತಾಲ್ಲೂಕು ಆರೋಗ್ಯಾಧಿಕಾರಿ/ಕಾರ್ಯಕ್ರಮಾಧಿಕಾರಿಯಾಗಿ ಸಲ್ಲಿಸಿರತಕ್ಕದ್ದು.

(ಸಿ) ಅಧಿಕಾರಿಯು ಉತ್ತಮ ಸೇವಾ ದಾಖಲೆ ಹೊಂದಿದ್ದು, ಯಾವುದೇ ಇಲಾಖಾ/ ಕ್ರಿಮಿನಲ್ ವಿಚಾರಣೆ ಇರಕೂಡದು.

(ಡಿ) ಕ್ಲಿನಿಕಲ್ ವಿಷಯದಲ್ಲಿ ಸ್ನಾತಕೋತ್ತರ ಪದವಿ ಅಥವಾ ಡಿಪ್ಲೊಮಾ ಅಪೇಕ್ಷಣೀಯ.

(ಇ) ಆಸ್ಪತ್ರೆ ನಿರ್ವಹಣೆಯಲ್ಲಿ ತರಬೇತಿ/ಆಸ್ಪತ್ರೆ ನಿರ್ವಹಣೆ ಕುರಿತಂತೆ ಸ್ನಾತಕೋತ್ತರ ಪದವಿ ಅಥವಾ ಡಿಪ್ಲೊಮಾ ಅಪೇಕ್ಷಣೀಯ.

(3) ಪ್ರಮುಖ ಆಸ್ಪತ್ರೆಗಳ ಸೂಪರಿಂಟೆಂಡೆಂಟ್‌ಗಳು.

(ಎ) ನಿಯತಕಾಲಿಕವಾಗಿ (Regular) ನೇಮಕಗೊಂಡು ಕನಿಷ್ಠ ಇಪ್ಪತ್ತೈದು ವರ್ಷಗಳ ಸೇವೆಯನ್ನು ಸಲ್ಲಿಸಿರುವ ಹಿರಿಯ ತಜ್ಞರು ಪರಿಗಣನೆಗೆ ಅರ್ಹರಾಗಿರುತ್ತಾರೆ. ಆ ಪೈಕಿ ಜಿಲ್ಲಾ ಶಸ್ತ್ರ ಚಿಕಿತ್ಸಕರಾಗಿ ಕನಿಷ್ಠ ಎರಡು ವರ್ಷಗಳ ಸೇವೆಯನ್ನು ಸಲ್ಲಿಸಿರತಕ್ಕದ್ದು.

(ಬಿ) ಅಧಿಕಾರಿಯು ಉತ್ತಮ ಸೇವಾ ದಾಖಲೆ ಹೊಂದಿದ್ದು, ಯಾವುದೇ ಇಲಾಖಾ/ ಕ್ರಿಮಿನಲ್ ವಿಚಾರಣೆ ಇರಕೂಡದು.

(ಸಿ) ಕ್ಲಿನಿಕಲ್ ವಿಷಯದಲ್ಲಿ ಸ್ನಾತಕೋತ್ತರ ಪದವಿ ಅಥವಾ ಡಿಪ್ಲೊಮಾ ಅಪೇಕ್ಷಣೀಯ.

(ಡಿ) ಆಸ್ಪತ್ರೆ ನಿರ್ವಹಣೆಯಲ್ಲಿ ತರಬೇತಿ/ಆಸ್ಪತ್ರೆ ನಿರ್ವಹಣೆ ಕುರಿತಂತೆ ಸ್ನಾತಕೋತ್ತರ ಪದವಿ ಅಥವಾ ಡಿಪ್ಲೊಮಾ ಅಪೇಕ್ಷಣೀಯ.

(4) ಉಪ ನಿರ್ದೇಶಕರು.

(ಎ) ನಿಯತಕಾಲಿಕವಾಗಿ (Regular) ನೇಮಕಗೊಂಡು ಕನಿಷ್ಠ ಇಪ್ಪತ್ತು ವರ್ಷಗಳ ಸೇವೆಯನ್ನು ಸಲ್ಲಿಸಿರುವ ಉಪ ಮುಖ್ಯ ವೈದ್ಯಾಧಿಕಾರಿ ಅಥವಾ ಹಿರಿಯ ತಜ್ಞರು ಪರಿಗಣನೆಗೆ ಅರ್ಹರಾಗಿರುತ್ತಾರೆ. ಆ ಪೈಕಿ ಜಿಲ್ಲಾಮಟ್ಟದ ಕಾರ್ಯಕ್ರಮಾಧಿಕಾರಿಯಾಗಿ ಕನಿಷ್ಠ ಮೂರು ವರ್ಷಗಳ ಸೇವೆಯನ್ನು ಸಲ್ಲಿಸಿರತಕ್ಕದ್ದು.

(ಬಿ) ಅಧಿಕಾರಿಯು ಉತ್ತಮ ಸೇವಾ ದಾಖಲೆ ಹೊಂದಿದ್ದು, ಯಾವುದೇ ಇಲಾಖಾ/ ಕ್ರಿಮಿನಲ್ ವಿಚಾರಣೆ ಇರಕೂಡದು.

(33)



(5) ಜಿಲ್ಲಾ ಮಟ್ಟದ ಕಾರ್ಯಕ್ರಮಾಧಿಕಾರಿಗಳು.

(ಎ) ನಿಯತಕಾಲಿಕವಾಗಿ (Regular) ನೇಮಕಗೊಂಡು ಕನಿಷ್ಠ ಹದಿಮೂರು ವರ್ಷಗಳ ಸೇವೆಯನ್ನು ಸಲ್ಲಿಸಿರುವ ಹಿರಿಯ ವೈದ್ಯಾಧಿಕಾರಿ/ತಜ್ಞರು ಪರಿಗಣನೆಗೆ ಅರ್ಹರಾಗಿರುತ್ತಾರೆ. ಆ ಪೈಕಿ ನಿಯತಕಾಲಿಕವಾಗಿ ನೇಮಕಗೊಂಡ ನಂತರ ಕನಿಷ್ಠ ಮೂರು ವರ್ಷಗಳ ಸೇವೆಯನ್ನು ಗ್ರಾಮೀಣ ಪ್ರದೇಶದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಸಲ್ಲಿಸಿರತಕ್ಕದ್ದು.

(ಬಿ) ಅಧಿಕಾರಿಯು ಉತ್ತಮ ಸೇವಾ ದಾಖಲೆ ಹೊಂದಿದ್ದು, ಯಾವುದೇ ಇಲಾಖಾ/ ಕ್ರಿಮಿನಲ್ ವಿಚಾರಣೆ ಇರಕೂಡದು.

(ಸಿ) ಯಾವ ಕ್ಷೇತ್ರದಲ್ಲಿ ಕಾರ್ಯಕ್ರಮಾಧಿಕಾರಿಯಾಗಿ ಆಯ್ಕೆಗೊಳ್ಳುವರು ಅದರಲ್ಲಿ ಕಾರ್ಯಾಗಾರ ಅಥವಾ ತರಬೇತಿ ಹೊಂದಿರುವುದು ಅಪೇಕ್ಷಣೀಯ.

(ಡಿ) ಕಾರ್ಯಕ್ರಮಾಧಿಕಾರಿಯಾಗಿ ನೇಮಕಗೊಂಡ ಮೂರು ತಿಂಗಳ ಒಳಗಾಗಿ ಅಧಿಕಾರಿಯನ್ನು ಸಂಬಂಧಪಟ್ಟ ಕ್ಷೇತ್ರದ ಕುರಿತು ಒಂದು ಅಥವಾ ಎರಡು ವಾರಗಳ ಪುನರ್‌ಮನನ ತರಬೇತಿ ಕಾರ್ಯಕ್ರಮಕ್ಕೆ ಕಳುಹಿಸಲಾಗುವುದು.

(6) ತಾಲ್ಲೂಕು ಆರೋಗ್ಯಾಧಿಕಾರಿ.

(ಎ) ನಿಯತಕಾಲಿಕವಾಗಿ (Regular) ನೇಮಕಗೊಂಡು ಕನಿಷ್ಠ ಎಂಟು ವರ್ಷಗಳ ಸೇವೆಯನ್ನು ಸಲ್ಲಿಸಿರುವ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ/ಹಿರಿಯ ವೈದ್ಯಾಧಿಕಾರಿಗಳು ಪರಿಗಣನೆಗೆ ಅರ್ಹರಾಗಿರುತ್ತಾರೆ. ಆ ಪೈಕಿ ನಿಯತಕಾಲಿಕವಾಗಿ ನೇಮಕಗೊಂಡ ನಂತರ ಕನಿಷ್ಠ ಮೂರು ವರ್ಷಗಳ ಸೇವೆಯನ್ನು ಗ್ರಾಮೀಣ ಪ್ರದೇಶದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಸಲ್ಲಿಸಿರತಕ್ಕದ್ದು.

(ಬಿ) ಅಧಿಕಾರಿಯು ಉತ್ತಮ ಸೇವಾ ದಾಖಲೆ ಹೊಂದಿದ್ದು, ಯಾವುದೇ ಇಲಾಖಾ/ ಕ್ರಿಮಿನಲ್ ವಿಚಾರಣೆ ಇರಕೂಡದು.

(7) ಜಿಲ್ಲಾ ಪ್ರಾಯೋಜನಾ ನಿರ್ವಹಣಾಧಿಕಾರಿಗಳು.

(ಎ) ನಿಯತಕಾಲಿಕವಾಗಿ (Regular) ನೇಮಕಗೊಂಡು ಕನಿಷ್ಠ ಹತ್ತು ವರ್ಷಗಳ ಸೇವೆಯನ್ನು ಸಲ್ಲಿಸಿರುವ ಹಿರಿಯ ವೈದ್ಯಾಧಿಕಾರಿ/ ಉಪ ಮುಖ್ಯ ವೈದ್ಯಾಧಿಕಾರಿ/ ತಜ್ಞರು/ ಹಿರಿಯ ತಜ್ಞರು ಪರಿಗಣನೆಗೆ ಅರ್ಹರಾಗಿರುತ್ತಾರೆ. ಆ ಪೈಕಿ ನಿಯತಕಾಲಿಕವಾಗಿ ನೇಮಕಗೊಂಡ ನಂತರ ಕನಿಷ್ಠ ಮೂರು ವರ್ಷಗಳ ಸೇವೆಯನ್ನು ಗ್ರಾಮೀಣ ಪ್ರದೇಶದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಸಲ್ಲಿಸಿರತಕ್ಕದ್ದು.

(ಬಿ) ಅಧಿಕಾರಿಯು ಉತ್ತಮ ಸೇವಾ ದಾಖಲೆ ಹೊಂದಿದ್ದು, ಯಾವುದೇ ಇಲಾಖಾ/ ಕ್ರಿಮಿನಲ್ ವಿಚಾರಣೆ ಇರಕೂಡದು.

(ಸಿ) ಸಾರ್ವಜನಿಕ ಆರೋಗ್ಯದಲ್ಲಿ ಸ್ನಾತಕೋತ್ತರ ಅಥವಾ ಡಿಪ್ಲೊಮಾ ವಿದ್ಯಾರ್ಹತೆ ಅಪೇಕ್ಷಣೀಯ.

(ಡಿ) ಜಿಲ್ಲಾ ಪ್ರಾಯೋಜನಾ ನಿರ್ವಹಣಾಧಿಕಾರಿಯ ಹುದ್ದೆಯ ಅಭ್ಯರ್ಥಿಗಳಿಗೆ ಲಿಖಿತ ಪರೀಕ್ಷೆ ಕಡ್ಡಾಯ.

(ಇ) ಜಿಲ್ಲಾ ಪ್ರಾಯೋಜನಾ ನಿರ್ವಹಣಾಧಿಕಾರಿಯಾಗಿ ನೇಮಕಗೊಂಡ ಮೂರು ತಿಂಗಳ ಒಳಗಾಗಿ ಅಧಿಕಾರಿಯನ್ನು ಸಂಬಂಧಪಟ್ಟ ಕ್ಷೇತ್ರದ ಕುರಿತು ಒಂದು ವಾರದ ಪುನರ್‌ಮನನ ತರಬೇತಿ ಕಾರ್ಯಕ್ರಮಕ್ಕೆ ಕಳುಹಿಸಲಾಗುವುದು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ/ಜಿಲ್ಲಾ ಶಸ್ತ್ರ ಚಿಕಿತ್ಸಕರು/ ಪ್ರಮುಖ ಆಸ್ಪತ್ರೆಗಳ ಸೂಪರಿಂಟೆಂಡ್‌ಗಳು/ ಜಿಲ್ಲಾ ಪ್ರಾಯೋಜನಾ ನಿರ್ವಹಣಾಧಿಕಾರಿಗಳು/ ತಾಲ್ಲೂಕು ಆರೋಗ್ಯಾಧಿಕಾರಿಗಳ ಹುದ್ದೆಗಳಿಗೆ ದಕ್ಷತೆ ಹಾಗೂ ಸೇವಾ ಜೇಷ್ಠತೆಯನ್ನು ಹೊಂದಿರತಕ್ಕ ಅಧಿಕಾರಿಗಳನ್ನು ಆಯಾಯ ಹುದ್ದೆಗಳಿಗೆ ನಿಗದಿಪಡಿಸಲಾಗಿರುವ ಮಾನದಂಡಗಳಿಗೆ ಒಳಪಟ್ಟು ಆಯ್ಕೆ ಮಾಡಲಾಗುವುದು. ಆದರೆ ಆಯಾಯಾ ಜಿಲ್ಲೆ/ತಾಲ್ಲೂಕು/ಆಸ್ಪತ್ರೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳಿಗಿಂತ ಆಯ್ಕೆಗೊಂಡ ಅಧಿಕಾರಿಯು ಸೇವಾ ಜೇಷ್ಠತೆಯಲ್ಲಿ ಹಿರಿಯರಾಗಿರಬೇಕೆಂಬ ಕಡ್ಡಾಯವಿಲ್ಲ.

ಮೇಲ್ಕಂಡ ಎಲ್ಲಾ ವರ್ಗಗಳಲ್ಲಿ ಹುದ್ದೆಗಳನ್ನು ತುಂಬುವಾಗ ಅರ್ಹ ಸೇವಾನಿರತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗುವುದು. ಮೇಲೆ ತಿಳಿಸಿದ ಮಾನದಂಡಗಳನ್ನು ಪೂರೈಸುವ ಅರ್ಜಿಗಳನ್ನು ಇಲಾಖೆಯ ವೃಂದ ನಿರ್ವಹಣಾ ಪ್ರಾಧಿಕಾರವು ಪರಿಶೀಲಿಸಿ/ಪರಿಗಣಿಸಿ ಅಭ್ಯರ್ಥಿಗಳನ್ನು ಆಯ್ಕೆಮಾಡಲಾಗುವುದು.

ಜಿಲ್ಲಾ ಮಟ್ಟದ ಕಾರ್ಯಕ್ರಮಾಧಿಕಾರಿಗಳು, ತಾಲ್ಲೂಕು ಆರೋಗ್ಯಾಧಿಕಾರಿಗಳು ಮತ್ತು ಜಿಲ್ಲಾ ಪ್ರಾಯೋಜನಾ ನಿರ್ವಹಣಾ ಅಧಿಕಾರಿಗಳ ಹುದ್ದೆಗಳಿಗೆ ಸಂಬಂಧಪಟ್ಟಂತೆ, ಮೇಲೆ ತಿಳಿಸಿದ ಮಾನದಂಡಗಳನ್ನು ಅನುಸರಿಸಿದ ನಂತರವೇ ಕರ್ನಾಟಕ ವೈದ್ಯಾಧಿಕಾರಿಗಳು ಮತ್ತು ಇತರ ಸಿಬ್ಬಂದಿ (ವರ್ಗಾವಣೆ) ಕಾಯ್ದೆ, 2011 ರ ಪ್ರಕಾರ ಕೌನ್ಸಿಲಿಂಗ್ ಮೂಲಕ ವರ್ಗಾವಣೆ ಮಾಡಲು ಕ್ರಮವಹಿಸತಕ್ಕದ್ದು.

(ಬಿ.ವಿಷ್. ಹುಬ್ಬಳ್ಳಿ)

ಸರ್ಕಾರದ ಅಧೀನ ಕಾರ್ಯದರ್ಶಿ,

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.

36 35

ಕರ್ನಾಟಕ ಸರ್ಕಾರ

ಸಂಖ್ಯೆ: ಆಕುಕ 112 ಹೆಚ್‌ಎಸ್‌ಹೆಚ್ 2013 (ಭಾಗ)

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ 21-06-2014

## ತಿದ್ದುಪಡಿ

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕೆಲವು ಆಡಳಿತಾತ್ಮಕ ಮತ್ತು ವೈದ್ಯ ವೃಂದದ ಹುದ್ದೆಗಳನ್ನು ಭರ್ತಿ ಮಾಡಲು ಮಾನದಂಡಗಳನ್ನು ರೂಪಿಸಿ ಹೊರಡಿಸಲಾಗಿರುವ ಸರ್ಕಾರದ ಆದೇಶ ಸಂಖ್ಯೆ: ಆಕುಕ 82 ಎಂಎಸ್‌ಎಸ್ 2011, ದಿನಾಂಕ: 02-06-2011 ರ ಅನುಬಂಧದಲ್ಲಿನ ಮಾನದಂಡದ ಕ್ರಮಸಂಖ್ಯೆ: 1(ಎ), 2(ಎ), 3(ಎ), 4(ಎ), 5(ಎ), 6(ಎ) ಮತ್ತು 7(ಎ) ರಲ್ಲಿ "ನಿಯತಕಾಲಿಕವಾಗಿ (Regular) ನೇಮಕಗೊಂಡು" ಎಂಬ ಪದಗಳ ಬದಲಿಗೆ "ನಿಯತಕಾಲಿಕವಾಗಿ ನೇಮಕಗೊಳ್ಳುವ ಮೊದಲು ಸಲ್ಲಿಸಿದ ಒಟ್ಟಾರೆ ಗುತ್ತಿಗೆ ಸೇವಾವಧಿಯನ್ನು ಒಳಗೊಂಡಂತೆ" ಎಂದು ಓದಿಕೊಳ್ಳತಕ್ಕದ್ದು.

ದಿನಾಂಕ:2-6-2011ರ ಆದೇಶದಲ್ಲಿನ ಉಳಿದ ಮಾನದಂಡಗಳು ಯಥಾವತ್ತಾಗಿ ಜಾರಿಯಲ್ಲಿರುತ್ತವೆ

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ
21.6.14
(ನಾಗರಾಜ್ ಜಿ.ಎನ್.)
ಸರ್ಕಾರದ ಅಧೀನ ಕಾರ್ಯದರ್ಶಿ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ಸೇವೆಗಳು)

ಇವರಿಗೆ,

1) ಪ್ರಧಾನ ಮಹಾಲೇಖಪಾಲರು, (ಲೆಕ್ಕಪತ್ರ/ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು
2) ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು
3) ಯೋಜನಾ ಆಡಳಿತಾಧಿಕಾರಿಗಳು, ಕೆ.ಹೆಚ್.ಎಸ್.ಡಿ.ಆರ್.ಪಿ., ಬೆಂಗಳೂರು
4) ಅಭಿಯಾನ ನಿರ್ದೇಶಕರು, ಎನ್.ಆರ್.ಹೆಚ್.ಎಂ., ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು
5) ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು (ಈ ತಿದ್ದುಪಡಿಯನ್ನು ವೆಬ್‌ಸೈಟ್‌ನಲ್ಲಿ ಪ್ರಕಟಿಸತಕ್ಕದ್ದು)
6) ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು
7) ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು
8) ಎಲ್ಲಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು
9) ಎಲ್ಲಾ ಜಿಲ್ಲಾಸ್ಪತ್ರೆಯ ಜಿಲ್ಲಾ ಶಸ್ತ್ರ ಚಿಕಿತ್ಸಕರು
10) ಅಧ್ಯಕ್ಷರು, ಕರ್ನಾಟಕ ವೈದ್ಯಾಧಿಕಾರಿಗಳ ಸಂಘ, ಬೆಂಗಳೂರು
11) ಇಲಾಖೆಯ ವೆಬ್‌ಸೈಟ್
12) ಶಾಖಾ ರಕ್ಷಾ ಕಡತ / ಬಿಡಿ ಪ್ರತಿಗಳು

ಪ್ರತಿ ಮಾಹಿತಿಗಾಗಿ:

1) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ
2) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಉಪ ಕಾರ್ಯದರ್ಶಿ-1 ಮತ್ತು 2 ರವರ ಆಪ್ತ ಶಾಖೆ, ಆ.ಕು.ಕ ಇಲಾಖೆ
3) ಸರ್ಕಾರದ ಎಲ್ಲಾ ಅಧೀನ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ